# National
# Kannada
# 06.11.2025 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತ; ಶಾಂತಿಯುತವಾಗಿ ನಡೆದ ಮತದಾನ

ವಂದೇ ಮಾತರಂ ದೇಶಭಕ್ತಿ ಗೀತೆಯ 150ನೇ ವಾರ್ಷಿಕೋತ್ಸವ ಸ್ಮರಣಾರ್ಥ; ನಾಳೆ ದೇಶಾದ್ಯಂತ ವಿಶೇಷ ಕಾರ್ಯಕ್ರಮ

2. ಇದೇ ಶನಿವಾರದಂದು ನಾಲ್ಕು ಹೊಸ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಹಸಿರು ನಿಶಾನೆ ತೋರಲಿರುವ ಪ್ರಧಾನಿ ನರೇಂದ್ರ ಮೋದಿ

3. ನವದೆಹಲಿಯಲ್ಲಿ ನಡೆಯಲಿರುವ ಸಂಸದ್ ಖೇಲ್ ಮಹೋತ್ಸವ್ ಹಿನ್ನೆಲೆ ನಮೋ ರನ್ ಮ್ಯಾರಥಾನ್ ಆಯೋಜನೆ – ಕೇಂದ್ರ ಸಚಿವ ಹರ್ಷ ಮಲ್ಹೋತ್ರಾ

4. ನಾಲ್ಕನೇ ಅಂತಾರಾಷ್ಟ್ರೀಯ ಟಿ–20 ಕ್ರಿಕೆಟ್ ಪಂದ್ಯ; 48 ರನ್‌ಗಳಿಂದ ಆಸ್ಟ್ರೇಲಿಯಾ ವಿರುದ್ಧ ಜಯ ದಾಖಲಿಸಿದ ಭಾರತ

***************

ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದಲ್ಲಿ 18 ಜಿಲ್ಲೆಗಳಲ್ಲಿರುವ 121 ಕ್ಷೇತ್ರಗಳಲ್ಲಿ ಮತದಾನ ಸುಗಮವಾಗಿ ನಡೆಯಿತು. ಸಂಜೆ 5 ಗಂಟೆಯವರೆಗೆ ಶೇ. 60 ಕ್ಕೂ ಹೆಚ್ಚು ಮತದಾನ ದಾಖಲಾಗಿದೆ.

ಪಾಟ್ನಾ, ವೈಶಾಲಿ, ನಳಂದ, ಭೋಜ್‌ಪುರ, ಮುಂಗೇರ್, ಸರನ್, ಸಿವಾನ್, ಬೇಗುಸರಾಯ್, ಲಖಿಸರಾಯ್, ಗೋಪಾಲ್‌ಗಂಜ್, ಮುಜಾಫರ್‌ಪುರ, ದರ್ಭಂಗಾ, ಮಾಧೇಪುರ ಮತ್ತು ಸಹರ್ಸಾಗಳಲ್ಲಿ ಮತದಾನ ನಡೆಯಿತು.

ಬೆಳಿಗ್ಗೆ 7 ಗಂಟೆಗೆ ಮತದಾನ ಆರಂಭವಾಗಿ ಸಂಜೆ 6 ಗಂಟೆಯವರೆಗೆ ನಡೆಯಿತು. ಆದಾಗ್ಯೂ, ಭದ್ರತಾ ಕಾರಣಗಳಿಂದಾಗಿ, ಸಿಮ್ರಿ ಭಕ್ತಿಯಾರ್ಪುರ್, ಮಹಿಷಿ, ತಾರಾಪುರ್, ಮುಂಗೇರ್, ಜಮಾಲ್ಪುರ್ ಮತ್ತು ಸೂರ್ಯಗಢ ವಿಧಾನಸಭಾ ಕ್ಷೇತ್ರದ 56 ಮತಗಟ್ಟೆಗಳಲ್ಲಿ ಮತದಾನ ಸಂಜೆ 5 ಗಂಟೆಗೆ ಮುಕ್ತಾಯಗೊಂಡಿತು.

ಮುಕ್ತ, ನ್ಯಾಯಯುತ ಮತ್ತು ಶಾಂತಿಯುತ ಮತದಾನವನ್ನು ಖಚಿತಪಡಿಸಿಕೊಳ್ಳಲು ವ್ಯಾಪಕ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿತ್ತು.

ಈ ಹಂತವು ಬಿಜೆಪಿ ನಾಯಕರು ಮತ್ತು ಉಪಮುಖ್ಯಮಂತ್ರಿಗಳಾದ ಸಾಮ್ರಾಟ್ ಚೌಧರಿ ಮತ್ತು ವಿಜಯ್ ಕುಮಾರ್ ಸಿನ್ಹಾ ಸೇರಿದಂತೆ ಹಲವಾರು ಪ್ರಮುಖ ನಾಯಕರ ರಾಜಕೀಯ ಭವಿಷ್ಯವನ್ನು ನಿರ್ಧರಿಸಲಿದೆ. ಆರ್‌ಜೆಡಿ ನಾಯಕ ಮತ್ತು ಮಹಾಘಟಬಂಧನ್‌ನ ಮುಖ್ಯಮಂತ್ರಿ ಅಭ್ಯರ್ಥಿ ತೇಜಸ್ವಿ ಪ್ರಸಾದ್ ಯಾದವ್ ಕೂಡ ಚುನಾವಣಾ ಕಣದಲ್ಲಿದ್ದಾರೆ.

ಮೊದಲ ಹಂತದಲ್ಲಿ ಮುಕ್ತ, ನ್ಯಾಯಯುತ ಮತ್ತು ಶಾಂತಿಯುತ ಮತದಾನವನ್ನು ಖಚಿತಪಡಿಸಿಕೊಳ್ಳಲು ವ್ಯಾಪಕ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿತ್ತು.

ಏತನ್ಮಧ್ಯೆ, ಬಿಹಾರದಲ್ಲಿ ಎರಡನೇ ಹಂತದ ವಿಧಾನಸಭಾ ಚುನಾವಣೆಗೆ ಪ್ರಚಾರ ಭರದಿಂದ ಸಾಗಿದೆ. ಎನ್‌ಡಿಎ ಮತ್ತು ಮಹಾಘಟಬಂಧನ್ ನಾಯಕರು ತಮ್ಮ ಅಭ್ಯರ್ಥಿಗಳನ್ನು ಬೆಂಬಲಿಸಿ ಸತತ ರ್‍ಯಾಲಿಗಳು ಮತ್ತು ರೋಡ್‌ಶೋಗಳನ್ನು ನಡೆಸಿದರು.

ಹಿರಿಯ ಬಿಜೆಪಿ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಇಂದು ರಾಜ್ಯದ ಅರಾರಿಯಾ ಮತ್ತು ಭಾಗಲ್ಪುರದಲ್ಲಿ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದರು. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಬಿಹಾರದ ಪೂರ್ಣಿಯಾದಲ್ಲಿ ರ್‍ಯಾಲಿ ನಡೆಸಿದರು.

ಎರಡನೇ ಹಂತದಲ್ಲಿ, 20 ಜಿಲ್ಲೆಗಳಾದ್ಯಂತ 122 ವಿಧಾನಸಭಾ ಕ್ಷೇತ್ರಗಳಿಗೆ ಈ ತಿಂಗಳ 11 ರಂದು ಚುನಾವಣೆ ನಡೆಯಲಿದೆ. ಮತ ಎಣಿಕೆ ನವೆಂಬರ್ 14 ರಂದು ನಡೆಯಲಿದೆ.

***************

ದೇಶಭಕ್ತಿ ಗೀತೆ ವಂದೇ ಮಾತರಂನ 150ನೇ ವಾರ್ಷಿಕೋತ್ಸವದ ಸ್ಮರಣಾರ್ಥ ಬಿಜೆಪಿಯಿಂದ ನಾಳೆ ದೇಶಾದ್ಯಂತ 150 ಸ್ಥಳಗಳಲ್ಲಿ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಿದೆ.

ಭಾರತವು ತನ್ನ ದೇಶ ಭಕ್ತಿ ಗೀತೆಗೆ ವಂದೇ ಮಾತರಂನ 150ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿದೆ. ಭಾರತೀಯರನ್ನು ಒಗ್ಗೂಡಿಸಲು ಮತ್ತು ರಾಷ್ಟ್ರದ ಚೈತನ್ಯವನ್ನು ಆಚರಿಸಲು ಪ್ರೇರೇಪಿಸಿದ ಹಾಡು ಇದಾಗಿದೆ. ಪ್ರಧಾನಿ ನರೇಂದ್ರ ಮೋದಿ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪದಗಳಿಗೆ ಮೀರಿದ ಭಾವನೆಯಾಗಿದ್ದು, ಆ ಅಮೂರ್ತ ಭಾವನೆಗೆ ಸ್ಪಷ್ಟವಾದ ಧ್ವನಿ ರೂಪವನ್ನು ನೀಡುವ ಹಾಡು ವಂದೇ ಮಾತರಂ ಎಂದು ಹೇಳಿದ್ದಾರೆ.
ವಂದೇ ಮಾತರಂ ಗೀತೆಯ ಇತಿಹಾಸವನ್ನು ನೋಡುವುದಾದರೆ, ಪ್ರಸಿದ್ಧ ಬಂಗಾಳಿ ಕವಿ ಮತ್ತು ಕಾದಂಬರಿಕಾರ ಬಂಕಿಮ್ ಚಂದ್ರ ಚಟರ್ಜಿ ಬರೆದ ವಂದೇ ಮಾತರಂ ದೇಶಭಕ್ತಿ ಗೀತೆಯು ಭಾರತದ ಜಾಗೃತಿಯ ಸಂಕೇತವಾಗಿ ನಿಂತಿದೆ. ಬ್ರಿಟಿಷ್ ವಸಾಹತುಶಾಹಿ ಆಳ್ವಿಕೆಯು ತನ್ನ ಹಿಡಿತವನ್ನು ಬಿಗಿಗೊಳಿಸುತ್ತಿದ್ದಂತೆ, ವಂದೇ ಮಾತರಂ ಭಾರತದ ಸ್ವಾತಂತ್ರ್ಯ ಚಳವಳಿಯಲ್ಲಿ ಧ್ವನಿಯನ್ನು ಕಂಡುಕೊಂಡಿತು. ಕಾಲಾನಂತರದಲ್ಲಿ, ವಂದೇ ಮಾತರಂ ಸ್ವಾತಂತ್ರ್ಯ ಹೋರಾಟಗಾರರ ಘೋಷವಾಕ್ಯವಾಯಿತು, ಮಾತೃಭೂಮಿಯ ಮೇಲಿನ ಪ್ರೀತಿ ಮತ್ತು ಭಕ್ತಿಯ ಸಂಕೇತ ಮತ್ತು ವಿದೇಶಿ ಶಕ್ತಿಯ ವಿರುದ್ಧದ ಪ್ರತಿರೋಧದ ಘೋಷಣೆಯಾಯಿತು.

***************

ಪ್ರಧಾನಿ ನರೇಂದ್ರ ಮೋದಿ ಇದೇ ಶನಿವಾರ ವಾರಣಾಸಿಗೆ ಭೇಟಿ ನೀಡಲಿದ್ದು, ನಾಲ್ಕು ಹೊಸ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಹಸಿರು ನಿಶಾನೆ ತೋರಲಿದ್ದಾರೆ.
ನೂತನ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಬನಾರಸ್–ಖಜುರಾಹೊ, ಲಕ್ನೋ–ಸಹಾರನ್‌ಪುರ, ಫಿರೋಜ್‌ಪುರ–ದೆಹಲಿ ಮತ್ತು ಎರ್ನಾಕುಲಂ–ಬೆಂಗಳೂರು ಮಾರ್ಗಗಳಲ್ಲಿ ಕಾರ್ಯನಿರ್ವಹಿಸಲಿವೆ.
ಈ ರೈಲುಗಳು ಪ್ರಯಾಣದ ಸಮಯವನ್ನು ಕಡಿಮೆ ಮಾಡುತ್ತವೆ, ಪ್ರಾದೇಶಿಕ ಚಲನಶೀಲತೆಯನ್ನು ಹೆಚ್ಚಿಸುತ್ತವೆ, ಪ್ರವಾಸೋದ್ಯಮವನ್ನು ಉತ್ತೇಜಿಸುತ್ತವೆ ಮತ್ತು ದೇಶಾದ್ಯಂತ ಆರ್ಥಿಕ ಚಟುವಟಿಕೆಯನ್ನು ಬೆಂಬಲಿಸುತ್ತವೆ.

***************

ಈ ತಿಂಗಳ 16 ರಂದು ನವದೆಹಲಿಯಲ್ಲಿ ನಡೆಯಲಿರುವ ಸಂಸದ್ ಖೇಲ್ ಮೊಹತ್ಸವ್‌ನ ಭಾಗವಾಗಿ ನಮೋ ರನ್ ಮ್ಯಾರಥಾನ್ ಅನ್ನು ಆಯೋಜಿಸಲಾಗುವುದು ಎಂದು ಕೇಂದ್ರ ಕಾರ್ಪೊರೇಟ್ ವ್ಯವಹಾರಗಳ ರಾಜ್ಯ ಸಚಿವ ಹರ್ಷ ಮಲ್ಹೋತ್ರಾ ಇಂದು ಘೋಷಿಸಿದ್ದಾರೆ.
ಸಂಸದ್ ಖೇಲ್ ಮೊಹತ್ಸವ್ ಅನ್ನು ಉದ್ಘಾಟಿಸಿ ನಂತರ ಮಾತನಾಡಿದ ಸಚಿವರು, ಖೇಲ್ ಮೊಹತ್ಸವ್‌ದಲ್ಲಿ ಭಾಗಿಯಾಗಲು ಸುಮಾರು ಮೂವತ್ತು ಸಾವಿರ ಜನರು ನೋಂದಾಯಿಸಿಕೊಂಡಿದ್ದಾರೆ ಎಂದು ಹೇಳಿದರು.
ಈ ಕಾರ್ಯಕ್ರಮದಲ್ಲಿ ಅಥ್ಲೆಟಿಕ್ಸ್, ಕಬಡ್ಡಿ, ಖೋ–ಖೋ, ವಾಲಿಬಾಲ್, ಕುಸ್ತಿ, ಫುಟ್‌ಬಾಲ್ ಮತ್ತು ಇತರ ಕ್ರೀಡೆಗಳು ಸೇರಿದಂತೆ ವಿವಿಧ ವಿಭಾಗಗಳಲ್ಲಿ 11 ಸ್ಪರ್ಧೆಗಳು ನಡೆಯಲಿದ್ದು, ವಿವಿಧ ವಯೋಮಾನದ ಬಾಲಕ ಮತ್ತು ಬಾಲಕಿಯರ ಭಾಗವಹಿಸುತ್ತಿದ್ದಾರೆ.
ಈ ಮಹೋತ್ಸವವು ಕ್ರೀಡೆ ಮತ್ತು ಫಿಟ್‌ನೆಸ್ ಅನ್ನು ಉತ್ತೇಜಿಸುವುದು ಮಾತ್ರವಲ್ಲದೆ ನಿಜವಾದ ಪ್ರತಿಭೆಯನ್ನು ಗುರುತಿಸುವುದು ಮತ್ತು ಪೋಷಿಸುವುದು, ಯುವಕರನ್ನು ಬಲಿಷ್ಠ ರಾಷ್ಟ್ರವನ್ನು ನಿರ್ಮಿಸುವತ್ತ ಮಾರ್ಗದರ್ಶನ ಮಾಡುವುದು ಗುರಿಯಾಗಿದೆ ಎಂದು ಅವರು ಹೇಳಿದರು.

***************

ಪಾಂಡಿಚೇರಿ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಪಿ. ಪ್ರಕಾಶ್ ಬಾಬು ಅವರು ಇಂದು ಸಂಸತ್ ಭವನದಲ್ಲಿ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರನ್ನು ಭೇಟಿ ಮಾಡಿದರು.
ವಿದ್ಯಾರ್ಥಿ ಸೌಲಭ್ಯಗಳನ್ನು ಸರಿಯಾಗಿ ಖಚಿತಪಡಿಸಿಕೊಳ್ಳುವುದು, ಉದ್ಯಮದ ಅವಶ್ಯಕತೆಗಳಿಗೆ ಅನುಗುಣವಾಗಿ ಉದಯೋನ್ಮುಖ ತಂತ್ರಜ್ಞಾನಗಳ ಕುರಿತು ಸುಧಾರಿತ ಕೋರ್ಸ್‌ಗಳನ್ನು ಪರಿಚಯಿಸುವುದು ಮತ್ತು ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳಿಗೆ ಮೀಸಲಾತಿ ಸೀಟುಗಳು ಸರಿಯಾಗಿ ಭರ್ತಿಯಾಗುವುದನ್ನು ಖಚಿತಪಡಿಸಿಕೊಳ್ಳುವ ಅಗತ್ಯವನ್ನು ಉಪಾಧ್ಯಕ್ಷ ರಾಧಾಕೃಷ್ಣನ್ ಒತ್ತಿ ಹೇಳಿದರು.

***************

ಆಸ್ಟ್ರೇಲಿಯಾದ ಕ್ವೀನ್ಸ್‌ಲ್ಯಾಂಡ್‌ನ ಕ್ಯಾರಾರಾ ಓವಲ್‌ನಲ್ಲಿ ನಡೆದ ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ನಾಲ್ಕನೇ ಟಿ–20 ಅಂತಾರಾಷ್ಟ್ರೀಯ ಪಂದ್ಯದಲ್ಲಿ ಭಾರತ 48 ರನ್‌ಗಳಿಂದ ಗೆಲುವು ಸಾಧಿಸಿದೆ.

ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಭಾರತ ನಿಗದಿತ 20 ಓವರ್ ಗಳಲ್ಲಿ 8 ವಿಕೆಟ್ ನಷ್ಟಕ್ಕೆ 167 ರನ್ ಗಳಿಸಿತು. ಭಾರತದ ಪರ ಶುಭ್‌ಮನ್ ಗಿಲ್ 46 ರನ್ ಗಳಿಸಿದರು. ಆಸ್ಟ್ರೇಲಿಯಾ ಪರ ಆಡಮ್ ಝಂಪಾ ಹಾಗೂ ನಥಾನ್ ಎಲ್ಲಿಸ್ ತಲಾ 3 ವಿಕೆಟ್ ಪಡೆದರು.

168 ರನ್ ಗುರಿ ಬೆನ್ನತ್ತಿದ ಆಸ್ಟ್ರೇಲಿಯಾ 18.2 ಓವರ್‌ಗಳಲ್ಲಿ ತನ್ನ ಎಲ್ಲಾ ವಿಕೆಟ್ ಕಳೆದುಕೊಂಡು 119 ರನ್ ಗಳಿಸಲಷ್ಟೇ ಶಕ್ತವಾಯಿತು. ಭಾರತದ ಪರ ವಾಷಿಂಗ್‌ಟನ್ ಸುಂದರ್ 3 ವಿಕೆಟ್, ಶಿವಂದುಬೆ ಹಾಗೂ ಅಕ್ಷರ್ ಪಟೇಲ್ ತಲಾ 2 ವಿಕೆಟ್ ಪಡೆದರು.

ಐದು ಪಂದ್ಯಗಳ ಸರಣಿಯಲ್ಲಿ ಭಾರತ 2–1 ಅಂತರದಿಂದ ಮುನ್ನಡೆ ಸಾಧಿಸಿದೆ. ಕೊನೆಯ ಹಾಗೂ 5ನೇ ಟಿ–20 ಪಂದ್ಯ ಇದೇ 8 ರಂದು ಆಸ್ಟ್ರೇಲಿಯಾದ ಗಬ್ಬಾ ಕ್ರೀಡಾಂಗಣದಲ್ಲಿ ನಡೆಯಲಿದೆ.

***************

ಐಸಿಸಿ ಮಹಿಳಾ ಕ್ರಿಕೆಟ್ ವಿಶ್ವಕಪ್ 2025ರ ವಿಜೇತ ಭಾರತೀಯ ಮಹಿಳಾ ಕ್ರಿಕೆಟ್ ತಂಡದ ಸದಸ್ಯರು ಇಂದು ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿದರು.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ರಾಷ್ಟ್ರಪತಿ ಮುರ್ಮು ಅವರು ತಂಡವನ್ನು ಅಭಿನಂದಿಸಿದ್ದಾರೆ ಮತ್ತು ಅವರು ಇತಿಹಾಸವನ್ನು ಸೃಷ್ಟಿಸಿದ್ದಾರೆ ಹಾಗೂ ಯುವ ಪೀಳಿಗೆಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು.

***************

ಶೂಟಿಂಗ್‌ನಲ್ಲಿ, ಪ್ಯಾರಿಸ್ ಒಲಿಂಪಿಕ್ಸ್ ಪದಕ ವಿಜೇತರಾದ ಮನು ಭಾಕರ್ ಮತ್ತು ಸ್ವಪ್ನಿಲ್ ಕುಸಾಲೆ ಈಜಿಪ್ಟ್‌ನ ಕೈರೋದಲ್ಲಿ ನಡೆಯಲಿರುವ ಐಎಸ್‌ಎಸ್‌ಎಫ್ ವಿಶ್ವ ಚಾಂಪಿಯನ್‌ಶಿಪ್ ರೈಫಲ್ ಮತ್ತು ಪಿಸ್ತೂಲ್ 2025 ರಲ್ಲಿ ಭಾರತದ 40 ಸದಸ್ಯರ ತಂಡವನ್ನು ಮುನ್ನಡೆಸಲಿದ್ದಾರೆ.

ಈ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ನಾಳೆ ಸಂಜೆ ನಡೆಯಲಿದ್ದು, ಸ್ಪರ್ಧೆಗಳು ಶನಿವಾರದಿಂದ ನಡೆಯಲಿವೆ.

ಈ ವರ್ಷ ಭಾರತೀಯ ಶೂಟರ್‌ಗಳು ಬ್ಯೂನಸ್ ಐರಿಸ್, ಲಿಮಾ, ಮ್ಯೂನಿಚ್ ಮತ್ತು ನಿಂಗ್ಬೋದಲ್ಲಿ ನಡೆದ ವಿಶ್ವಕಪ್ ಸ್ಪರ್ಧೆಗಳಲ್ಲಿ ಅನೇಕ ಪದಕಗಳನ್ನು ಗೆದ್ದು ಅತ್ಯುನ್ನತ ಫಾರ್ಮ್‌ನಲ್ಲಿದ್ದಾರೆ.

ಎರಡು ಬಾರಿ ಒಲಿಂಪಿಕ್ ಪದಕ ವಿಜೇತ ಮನು ಭಾಕರ್ ಪಿಸ್ತೂಲ್ ತಂಡವನ್ನು ಮುನ್ನಡೆಸಲಿದ್ದಾರೆ, ಇಶಾ ಸಿಂಗ್ ಮತ್ತು ಸುರುಚಿ ಸಿಂಗ್ ಅವರೊಂದಿಗೆ ಸೇರಿದ್ದಾರೆ.

ಈಜಿಪ್ಟ್ ಅಂತರರಾಷ್ಟ್ರೀಯ ಒಲಿಂಪಿಕ್ ನಗರದಲ್ಲಿ 72 ದೇಶಗಳ 720 ಶೂಟರ್‌ಗಳು ಈ ಚಾಂಪಿಯನ್‌ಶಿಪ್‌ಗೆ ಆತಿಥ್ಯ ವಹಿಸಲಿದ್ದು, ಈ ತಿಂಗಳ 17 ರವರೆಗೆ ನಡೆಯಲಿದೆ.

*******ಮುಕ್ತಾಯ*******